BS

# ಪ್ರಥಮ ಪಿ.ಯು.ಸಿ. ವಾರ್ಷಿಕ ಪರೀಕ್ಷೆ - 2018

I

## ಕನ್ನಡ - 01

ಸಮಯ : 3.15 ಗಂಟೆ

ಗರಿಷ್ಠ ಅಂಕಗಳು : 100

### ಅ-ವಿಭಾಗ

**I.** ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣವಾಕ್ಯದಲ್ಲಿ ಉತ್ತರಿಸಿ. **10x1=10**

1. ಅಲ್ಲಮ ಪ್ರಭುವಿನ ಅಂಕಿತ ಯಾವುದು?
2. ಅಖಂಡ ಕರ್ನಾಟಕ ಚಕ್ರವರ್ತಿ ಯಾರು?
3. ಮಗುವು ಯಾವುದರ ಹಾಗೆ ಬಾಗಬೇಕು?
4. ಎಂದೂ ಕರಗದ ಮೂಲಧನ ಯಾವುದು?
5. ಬಡಮಕ್ಕಳ ಪಾಲಿಗೆ ಚಾಕಲೇಟು ಯಾವುದು?
6. ಶಾಸ್ತ್ರಿ ಮಾಸ್ತರರ ಹೆಂಡತಿ ಹೆಸರೇನು?
7. ರಂಗರಾವ್ ಸ್ಥಾಪಿಸಿದ ಸಂಸ್ಥೆಯ ಹೆಸರೇನು?
8. ಪಿಶಾಚಿಗಳು ಯಾರ ಹೆಸರು ಕೇಳಿದರೆ ಹೆದರುತ್ತವೆ?
9. ರಾಜಕುಮಾರಿಗೆ ಬಂದ ರೋಗ ಯಾವುದು?
10. ಕತ್ತಲೆಯ ನಿಜ ಜನಕನು ಯಾರು?

### ಆ-ವಿಭಾಗ

**II.** ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. **4x2=8**

11. ಚೆನ್ನಯ್ಯನ ಗುಪ್ತಭಕ್ತಿ ಯಾವ ರೀತಿಯದು?
12. ಮೃಗಪಕ್ಷಿಗಳನ್ನು ಸ್ವಾಮಿಯು ಹೇಗೆ ರಕ್ಷಿಸುತ್ತಾನೆ?
13. ನಾಡಿಗೆ ಹೊರಗಿನ ಮತ್ತು ಒಳಗಿನ ಕಳ್ಳರು ಯಾರು?
14. ಹೊಟ್ಟೆಯೊಳಗಿನ ಮಗುವು ಯಾವ ವರವನ್ನು ಬೇಡುತ್ತಿದೆ?
15. ಜನರು ತತ್ತರಿಸಿರುವುದು ಯಾವುದಕ್ಕೆ?

ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು - ಮೂರು ವಾಕ್ಯಗಳಲ್ಲಿ ಉತ್ತರಿಸಿ. **3x2=6**

16. ವಿಜ್ಞಾನದ ಸಿದ್ಧಾಂತಗಳು ಹೇಗೆ ರೂಪುಗೊಳ್ಳುತ್ತವೆ?
17. ನೇಪಾಳದ ವೈಮಾನಿಕ ಸಾರಿಗೆ ವ್ಯವಸ್ಥೆ ಹೇಗಿದೆ?
18. ರೈತರ ಚಳುವಳಿಗಳು ಎಲ್ಲೆಲ್ಲಿ ನಡೆದವು?
19. ಕಾಡಿನಲ್ಲಿ ಹುಲಿಗಳೆಲ್ಲಾ ದಿಕ್ಕಾಪಾಲಾಗಿ ಏಕೆ ಓಡಿದವು?

ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. **3x2=6**

20. ಸಾಹ್ಕಾರಣ್ಣನು ತನ್ನ ಸಹೋದರರಿಗೆ ಆಸ್ತಿಯನ್ನು ಹೇಗೆ ಹಂಚಿದ?
21. ಪಿಶಾಚಿಗಳು ಯಾವುದರಿಂದ ನಾಣ್ಯ ಹಾಗೂ ಸಿಪಾಯಿಗಳನ್ನು ಮಾಡಿಕೊಡುತ್ತವೆ?
22. ಸೈತಾನನಿಗೆ ಮೊದಲ ಪಂಕ್ತಿ ಊಟ ನಿರಾಕರಿಸಿದ್ದು ಏಕೆ?
23. ಬೋಳೇಶಂಕರ ಏನೆಂದು ಡಂಗುರ ಸಾರಿಸುತ್ತಾನೆ?

### ಇ-ವಿಭಾಗ

**III.** ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭಸೂಚಿಸಿ ಸ್ವಾರಸ್ಯಗಳನ್ನು ವಿವರಿಸಿ. **2x3=6**

24. ಇಲ್ಲಿಗೆಕೈತಂದೆ ತಂದೆ ಸೌಮಿತ್ರಿ.
25. ಗುಡಿ ಚರ್ಚು ಮಸೀದಿಗಳೆಲ್ಲ ಹಾರಿ ಹೋಗುತ್ತವೆ.
26. ಚಿಂದಿ ಮನಸ್ಸುಗಳನ್ನು ಜೋಡಿಸಲು ಸೂಜಿ ಇದೆ.

ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭಸೂಚಿಸಿ ಸ್ವಾರಸ್ಯವನ್ನು ವಿವರಿಸಿ. **1x3=3**

27. ಇಲ್ಲೇ ಒಸಿ ದಿನ ಇಟ್ಕೊಂಡು ಉಳಿಸಿಕೊಡಿ.
28. ತಾನು ಅನುಭವಿಸಿದ ಯಾತನೆಗೆ ಎಣೆಯುಂಟೆ?

ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯವನ್ನು ವಿವರಿಸಿ. **1x3=3**

29. ಹೆಣ್ಣಿದ್ದ ಮನೆಯ ಸೌಭಾಗ್ಯವೇ ಬೇರೆ.
30. ಜನ ಎಲ್ಲಿ ಸೇರಿದರೆ ಅಲ್ಲೇ ದರ್ಬಾರು.

(ಪು.ತಿ.ನೋ.)

ಈ-ವಿಭಾಗ

IV. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 3x4=12

31. ಅಭಿಮನ್ಯುವಿನ ಶೌರ್ಯ ಸಾಹಸಗಳನ್ನು ದುರ್ಯೋಧನ ಹೇಗೆ ಹೊಗಳುತ್ತಾನೆ?
32. ಬದುಕು ಸಾರ್ಥಕವಾಗಬೇಕಾದರೆ ಯಾವ ಅಂಶಗಳು ಇರಬೇಕೆಂದು ಅಕ್ಕಮಹಾದೇವಿ ಹೇಳುತ್ತಾಳೆ?
33. ಮಾದೇವ ತನ್ನ ಶಿಶುಮಕ್ಕಳನ್ನು ಪರೀಕ್ಷಿಸಲು ಯಾರ್ಯಾರ ಸಹಕಾರವನ್ನು ಹೇಗೆ ಪಡೆದನು?
34. ಜಗತ್ತು ತನ್ನನ್ನು ಕೀಳಾಗಿ ಕಂಡು ನಿರಾಕರಿಸುತ್ತಿರುವ ಬಗೆಯನ್ನು ಕವಿ ಹೇಗೆ ಚಿತ್ರಿಸಿದ್ದಾನೆ.

ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 2x4=8

35. ಮೊಮ್ಮಗನ ಪ್ರಾಣ ಉಳಿಸಿಕೊಳ್ಳಲು ಕರಿಸಿದ್ದೇಗೌಡ ಪಟ್ಟ ಪಾಡೇನು?
36. ಹಳ್ಳಿಯ ಜನ ಕೈಯಲ್ಲೇ ಮುದ್ದೆ ತಿನ್ನುವ ಚಿತ್ರಣವನ್ನು ವಿವರಿಸಿ.
37. ರಂಗರಾವ್ ಅಸ್ಪೃಶ್ಯರನ್ನು ಶಿಕ್ಷಣ ಪಡೆಯಲು ಮನ ಒಲಿಸಿದ ಬಗೆಯನ್ನು ತಿಳಿಸಿ.

ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 2x4=8

38. ಬೋಳೇಶಂಕರನ ಅಣ್ಣಂದಿರೇ ವಾಸಿ ಎಂದು ಪಿಶಾಚಿ ಹೇಳಲು ಕಾರಣವೇನು?
39. ತನ್ನ ಕನಸನ್ನು ಕುರಿತು ಬೋಳೇಶಂಕರ ಮಂತ್ರಿಗೆ ಹೇಳಿದ್ದೇನು?
40. ಯುದ್ಧ ಮಾಡಲು ಸೈನಿಕರು ಏಕೆ ನಿರಾಕರಿಸುತ್ತಾರೆ?

ಉ-ವಿಭಾಗ

V. ಅ) ಒಂದು ಪದ್ಯಕ್ಕೆ ಭಾವಾರ್ಥ ಬರೆಯಿರಿ. 1x5=5

41. ಅನೃತಂ ಲೋಭಂ ಭಯಮೆಂ
ಬಿನಿತುಂ ನೀನಿರ್ದ ನಾಡೊಳಿರ್ಕುಮೆ ರವಿನಂ
ದನ ನನ್ನಿ ಜಾಗಮಣ್ಮೆಂ
ಬಿನಿತರ್ಕಂ ನೀನೇ ಮೊತ್ತ ಮೊದಲಿಗನಾದಯ್

42. ನವಿಲಿಗೆ ಚಿತ್ರ ಬರೆದವರು ಯಾರು
ಪವಳದ ಲತೆಗೆ ಕೆಂಪಿಟ್ಟವರು ಯಾರು
ಸವಿಮಾತಿನರಗಿಳಿಗೆ ಹಸುರು ಬರೆದವರು ಯಾರು
ಅವನೆ ಸಲಹುವನು ಇದಕೆ ಸಂಶಯವಿಲ್ಲ

ಭಾಷಾಭ್ಯಾಸ

ಅ) ಆರು ಪ್ರಶ್ನೆಗಳಿಗೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ. 6x2=12

| | | | | |
|---|---|---|---|---|
| 43. | ಪದಗಳ ಅರ್ಥ ಬರೆಯಿರಿ | : | ರುಧಿರ | ನಾಪಿತ |
| 44. | ಸಮಾನಾರ್ಥಕಗಳನ್ನು ಬರೆಯಿರಿ | : | ಉದಕ | ಕಣ್ಣು |
| 45. | ವಿರುದ್ಧಾರ್ಥಕ ಪದಗಳನ್ನು ಬರೆಯಿರಿ | : | ಜಾತ | ಗುಣ |
| 46. | ಬಿಡಿಸಿ ಬರೆಯಿರಿ | : | ಪನ್ನಗಾಭರಣ | ಕಾಲಾವಧಿ |
| 47. | ನಾನಾರ್ಥಗಳನ್ನು ಬರೆಯಿರಿ | : | ಬಟ್ಟೆ | ಕರ |
| 48. | ತದ್ಭವ ಬರೆಯಿರಿ | : | ನಕ್ಷೆ | ಭಕ್ತಿ |
| 49. | ಎರಡು ಅನ್ಯದೇಶ ಪದ ಬರೆಯಿರಿ. | | | |

ಇ) ಒಂದನ್ನು ಕುರಿತು ಪ್ರಬಂಧ ಬರೆಯಿರಿ. 1x5=5

50. ಅರಣ್ಯ ಮತ್ತು ವನ್ಯ ಜೀವಿ ಸಂರಕ್ಷಣೆ
51. ಬರಗಾಲ

ಈ) ಪತ್ರಲೇಖನ : ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ. 1x4=4

52. ಶೈಕ್ಷಣಿಕ ಪ್ರವಾಸಕ್ಕೆ ಅನುಮತಿ ಕೋರಿ ಪೋಷಕರಿಗೆ ಪತ್ರ ಬರೆಯಿರಿ.
53. ಶೈಕ್ಷಣಿಕ ಸಾಲ ಸೌಲಭ್ಯ ಕೋರಿ ಬ್ಯಾಂಕಿನ ವ್ಯವಸ್ಥಾಪಕರಿಗೆ ಪತ್ರ ಬರೆಯಿರಿ.

ಉ) ಈ ಕೆಳಗಿನ ಒಂದು ಗಾದೆಯನ್ನು ವಿಸ್ತರಿಸಿ. 1x4=4

54. ಆಳಾಗಿ ದುಡಿ ಅರಸಾಗಿ ಉಣ್ಣು
55. ಕುಂಬಾರನಿಗೆ ವರುಷ ದೊಣ್ಣೆಗೆ ನಿಮಿಷ